ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆ ವ್ಯಾಪ್ತಿಯಲ್ಲಿನ ರಸ್ತೆಗಳನ್ನು ದುರಸ್ತಿ ಮಾಡುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-

027 (182) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ 2 ವರ್ಷಗಳಲ್ಲಿ ಸತತವಾಗಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ಪ್ರವಾಹದಿಂದಾಗಿ ಮಡಿಕೇರಿ ನಗರಸಭೆ ವ್ಯಾಪ್ತಿಯ ಎಲ್ಲಾ ರಸ್ತೆಗಳು ಸಂಪೂರ್ಣವಾಗಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಗಳ ದುರಸ್ತಿಗಾಗಿ 2017-18, 2018-19 ಮತ್ತು 2019-2020ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಇ) ಬಿಡುಗಡೆಯಾಗಿರುವ ಈ ಅನುದಾನದಲ್ಲಿ ದುರಸ್ತಿ/ಅಭಿವೃದ್ಧಿ ಮಾಡಿರುವ ರಸ್ತೆಗಳ ಸಂಪೂರ್ಣ ವಿವರ ನೀಡುವುದು ?
(ಅಂದಾಜು ಮೊತ್ತ, ಖರ್ಚಾದ ಮೊತ್ತ ಪ್ರಗತಿಯ ಹಂತದ ವಿವರಗಳನ್ನು ಕಾಮಗಾರಿವಾರು ನೀಡುವುದು)